ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಕರ್ನಾಟಕ ವಿಧಾನ ಸಭೆ ಅಧಿವೇಶನ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ  ದಿನಾಂಕ : DATE : 27/9/20

# ಭೂ ಕಬಳಿಕೆ ನಿಷೇಧ ಕಾಯ್ದೆ ಅಂಗೀಕಾರ

## ರೈತರಿಗೆ ಆಗುತ್ತಿರುವ ಕಿರುಕುಳ ತಪ್ಪಿಸುವಂತೆ ಸರ್ಕಾರಕ್ಕೆ ಸರ್ವ ಪಕ್ಷ ಸದಸ್ಯರ ಮನವಿ

**ಬೆಂಗಳೂರು:** ಅರಣ್ಯ ಭೂಮಿಯಲ್ಲಿ ಕೃಷಿ ಚಟುವಟಿಕೆ ಹಾಗೂ ವಾಸವಾಗಿರುವ ರೈತರಿಗೆ ಅವಕಾಶ ಕಲ್ಪಿಸುವ ಭೂ ಕಬಳಿಕೆ ನಿಷೇಧ ಕಾಯ್ದೆಗೆ ವಿಧಾನಸಭೆಯಲ್ಲಿ ಅಂಗೀಕಾರ ನೀಡಲಾಯಿತು.

ವಿಧೇಯಕವನ್ನು ಎಲ್ಲ ಪಕ್ಷಗಳ ಸದಸ್ಯರು ಮುಕ್ತವಾಗಿ ಸ್ವಾಗತಿಸಿದ್ದು, ರಾಜ್ಯ ಸರ್ಕಾರ ಈ ಕಾಯ್ದೆ ಜಾರಿಗೊಳಿಸಿ ಅರಣ್ಯ ಇಲಾಖೆಯಿಂದ ರೈತರಿಗೆ ಆಗುತ್ತಿರುವ ಕಿರುಕುಳ ತಪ್ಪಿಸುವಂತೆ ಮನವಿ ಮಾಡಿದರು.




ಕಂದಾಯ ಸಚಿವ ಆರ್. ಅಶೋಕ್ ವಿಧೇಯಕದ ಕುರಿತು ವಿವರಣೆ ನೀಡಿ, 94ಸಿ ಮತ್ತು 94ಸಿಸಿ ಅಡಿಯಲ್ಲಿ ಅನೇಕ ರೈತರು ಅರ್ಜಿ ಹಾಕಿಕೊಂಡಿದ್ದು ಅವು ವಿಲೇವಾರಿಯಾಗದೇ ರೈತರು ಕೋರ್ಟ್‌ಗೆ ಅಲೆದಾಡುವ ಪರಿಸ್ಥಿತಿ ನಿರ್ಮಾಣವಾಗಿದೆ. ಈಗಾಗಲೇ ಕಂದಾಯ ಇಲಾಖೆ ಅರಣ್ಯ ಇಲಾಖೆಯೊಂದಿಗೆ ಚರ್ಚೆ ನಡೆಸಿದ್ದು ರಾಜ್ಯದಲ್ಲಿರುವ 9 ಲಕ್ಷ ಹೆಕ್ಟೇರ್ ಡೀಮ್ಡ್ ಅರಣ್ಯದಲ್ಲಿ 6 ಲಕ್ಷ ಡೀಮ್ಡ್ ಅರಣ್ಯ ಪ್ರದೇಶವನ್ನು ಕಂದಾಯ ಇಲಾಖೆಗೆ ನೀಡುವಂತೆ ಮಾತುಕತೆ ನಡೆಸಲಾಗಿದೆ.

ಅರಣ್ಯ ಇಲಾಖೆಯವರು ಈ ಹಿಂದೆ ಸುಪ್ರೀಂ ಕೋರ್ಟ್‌ನಲ್ಲಿ ಅರಣ್ಯ ಒತ್ತುವರಿ ಎಂದು ಅಫಿಡವಿಟ್ ಸಲ್ಲಿಸಿದ್ದಾರೆ. ಅದನ್ನು ವಾಪಸ್ ಪಡೆಯಲು ಕಂದಾಯ ಇಲಾಖೆ ಜೊತೆಗೆ ಮಾತುಕತೆ ನಡೆಸಲಾಗಿದ್ದು, ಆದಷ್ಟು ಬೇಗ ವಾಪಸ್ ಪಡೆಯಲಾಗುವುದು ಎಂದು ಹೇಳಿದರು. ಭೂ ಒತ್ತುವರಿ ಪ್ರಕರಣಗಳ ಕುರಿತು ವಿಶೇಷ ನ್ಯಾಯಾಲಯಗಳಲ್ಲಿ ನಡೆಯುತ್ತಿರುವ ಪ್ರಕರಣಗಳನ್ನು ರದ್ದುಪಡಿಸಿ ರೈತರಿಗೆ ಕೃಷಿ ಮುಂದುವರಿಸಲು ಅವಕಾಶ ಕಲ್ಪಿಸಬೇಕೆಂದು ಪಕ್ಷಬೇಧ ಮರೆತು ಶಾಸಕರು ಮನವಿ ಮಾಡಿದರು.



ಸದನದಲ್ಲಿ ಸಚಿವ ಜೆ.ಸಿ. ಮಾಧುಸ್ವಾಮಿ ಮಾತನಾಡಿದರು.

## ಶಾಸಕರ ಅನುದಾನ: 50 ಲಕ್ಷ ಶೀಘ್ರ ಬಿಡುಗಡೆ

**ವಿಧಾನ ಪರಿಷತ್ತು:** 'ಶಾಸಕರ ಪ್ರದೇಶಾಭಿವೃದ್ಧಿ ನಿಧಿ' ಅಡಿ ನೀಡಲಾಗುವ ತಲಾ ಎರಡು ಕೋಟಿ ಅನುದಾನದ ಪೈಕಿ ಶೀಘ್ರ 50 ಲಕ್ಷ ರೂ. ಬಿಡುಗಡೆ ಮಾಡಲಾಗುವುದು' ಎಂದು ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಜೆ.ಸಿ. ಮಾಧುಸ್ವಾಮಿ ತಿಳಿಸಿದರು. ಶನಿವಾರ ಮೇಲ್ಮನೆಯಲ್ಲಿ ಸದಸ್ಯ ಎಸ್. ರವಿ ಪ್ರಸ್ತಾಪಿಸಿದ ವಿಷಯಕ್ಕೆ ಪ್ರತಿಕ್ರಿಯಿಸಿದ ಅವರು, 'ಯೋಜನೆ ಅಡಿ ಪ್ರತಿ ವರ್ಷ ನೀಡಲಾಗುವ ತಲಾ ಎರಡು ಕೋಟಿ ರೂ.ಗಳಲ್ಲಿ ಪ್ರಸಕ್ತ ಸಾಲಿಗೆ ಈಗಾಗಲೇ 50 ಲಕ್ಷ ರೂ. ಬಿಡುಗಡೆ ಮಾಡಲಾಗಿದೆ. ಇನ್ನೂ 50 ಲಕ್ಷ ರೂ. ಬಿಡುಗಡೆಗೆ ಶೀಘ್ರ ಆದೇಶ ಹೊರಡಿಸಲಾಗುವುದು. ಸಾಧ್ಯವಾದರೆ ಉಳಿದ ಒಂದು ಕೋಟಿ ರೂ. ಅನುದಾನವನ್ನೂ ನೀಡಲಾಗುವುದು. ಹಿಂದಿನ ವರ್ಷದ ಅನುದಾನದ ಬಗ್ಗೆ ನನಗೆ ಮಾಹಿತಿ ಇಲ್ಲ' ಎಂದು ಹೇಳಿದರು.

## ಪ್ರತಿಪಕ್ಷದ ಸಭಾತ್ಯಾಗ: ವಿಧೇಯಕಕ್ಕೆ ಅನುಮೋದನೆ

**ವಿಧಾನ ಪರಿಷತ್ತು:** ಪ್ರತಿಪಕ್ಷದ ಸಭಾತ್ಯಾಗದ ನಡುವೆ ಹೆಚ್ಚು ಸಾಲ ಪಡೆಯಲು ಪೂರಕವಾದ 'ಕರ್ನಾಟಕ ಆರ್ಥಿಕ ಹೊಣೆಗಾರಿಕೆ ತಿದ್ದುಪಡಿ ವಿಧೇಯಕ'ಕ್ಕೆ ಸರ್ಕಾರ ಶನಿವಾರ ಮೇಲ್ಮನೆಯಲ್ಲಿ ಅನುಮೋದನೆ ಪಡೆಯಿತು. ಕೊರೊನಾ ಹಾವಳಿಯಿಂದ ಸರ್ಕಾರ ನಿರೀಕ್ಷಿತ ಆದಾಯ 1.79 ಕೋಟಿಗೆ ಬದಲಾಗಿ 1.14 ಕೋಟಿ ರೂ. ಮಾತ್ರ ಬಂದಿದೆ. ಸರಿಸುಮಾರು 65 ಸಾವಿರ ಕೋಟಿ ರೂ. ಖೋತಾ ಆಗಿದೆ. ಈ ಕೊರತೆ ಸರಿದೂಗಿಸಲು ರಾಜ್ಯದ ಒಟ್ಟು ಆಂತರಿಕ ಉತ್ಪನ್ನ (ಜಿಎಸ್‌ಡಿಪಿ)ವನ್ನು ಶೇ. 3ರಿಂದ ಶೇ.5ಕ್ಕೆ ಹೆಚ್ಚಿಸಲು ಅವಕಾಶ ಕಲ್ಪಿಸುವ ಆರ್ಥಿಕ ಹೊಣೆಗಾರಿಕೆ ತಿದ್ದುಪಡಿ ವಿಧೇಯಕ ಮಂಡಿಸಿತು.

ಇದರಿಂದ ಸುಮಾರು 33 ಸಾವಿರ ಕೋಟಿ ರೂ. ಸಾಲ ಪಡೆಯಲು ಸಾಧ್ಯವಾಗುತ್ತದೆ. ಸಾಲ ಮರುಪಾವತಿಗೆ 10 ವರ್ಷಗಳ ಕಾಲಾವಕಾಶ ಇರಲಿದೆ. ಇದರೊಂದಿಗೆ ರಾಜ್ಯದ ಒಟ್ಟಾರೆ ಸಾಲದ ಪ್ರಮಾಣ ನಾಲ್ಕು ಲಕ್ಷ ಕೋಟಿ ರೂ. ಆಗಲಿದೆ. ಆಡಳಿತ ಮುನ್ನಡೆಸಲು ಹಾಗೂ ಅಗತ್ಯ ಕಾರ್ಯಗಳಿಗೆ ಸದ್ಯದ ಪರಿಸ್ಥಿತಿಯಲ್ಲಿ ಇದು ಅನಿವಾರ್ಯ ಕೂಡ ಆಗಿದೆ ಎಂದು ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಜೆ.ಸಿ. ಮಾಧುಸ್ವಾಮಿ ಸದನಕ್ಕೆ ಮಾಹಿತಿ ನೀಡಿದರು.

**ಹೆಚ್ಚು ಸಾಲ ಪರಿಹಾರ ಅಲ್ಲ: ಪ್ರತಿಪಕ್ಷ:** ಇದಕ್ಕೆ ತೀವ್ರ ವಿರೋಧ ವ್ಯಕ್ತಪಡಿಸಿದ ಪ್ರತಿಪಕ್ಷಗಳು, ಅಧಿಕ ಸಾಲ ಮಾಡುವುದರಿಂದ ಸಮಸ್ಯೆ ಬಗೆಹರಿಯುವುದಿಲ್ಲ. ಅಷ್ಟಕ್ಕೂ ಸಾಲದ ಪ್ರಮಾಣ ಹೆಚ್ಚಿಸುವ ಬದಲಿಗೆ ಬಾಕಿ ಉಳಿಸಿಕೊಂಡಿರುವ ರಾಜ್ಯದ ಜಿಎಸ್‌ಟಿ ಹಣ ಪಾವತಿಸುವಂತೆ ಕೇಂದ್ರದ ಮೇಲೆ ಒತ್ತಡ ತರುವುದು ಹೆಚ್ಚು ಸೂಕ್ತ. ಬಿಹಾರ, ಗುಜರಾತಿಗೆ ನೀಡಿದಂತೆ ನಮ್ಮ ಬಾಕಿ ಹಣ ನೀಡುವ ಸಂಬಂಧ ಯಾಕೆ ಕೇಂದ್ರದ ಮನವೊಲಿಸಬಾರದು ಎಂದು ಒಕ್ಕೊರಲ ಒತ್ತಾಯ ಕೇಳಿಬಂತು.

## ಕೇಂದ್ರ ಸರ್ಕಾರದಿಂದ ಜಿಎಸ್‌ಟಿ ದ್ರೋಹ: ಸಿದ್ದು

**ಬೆಂಗಳೂರು:** ರಾಜ್ಯಗಳಿಗೆ ಜಿಎಸ್‌ಟಿ ಪರಿಹಾರ ನೀಡಲು ಸಂಗ್ರಹಿಸಿದ್ದ ಸೆಸ್ ಹಣವನ್ನು ಪ್ರಧಾನಿ ನರೇಂದ್ರ ಮೋದಿ ಸರ್ಕಾರ ಅನ್ಯ ಉದ್ದೇಶಕ್ಕೆ ಬಳಸಿದೆ ಎಂದು ಸಿಎಜಿ ನೀಡಿರುವ ವರದಿ, ರಾಜ್ಯ ಸರ್ಕಾರಗಳಿಗೆ ಕೇಂದ್ರ ಸರ್ಕಾರ ಬಗೆದಿರುವ ಜಿಎಸ್‌ಟಿ ದ್ರೋಹಕ್ಕೆ ಪುರಾವೆಯಾಗಿದೆ ಎಂದು ಪ್ರತಿಪಕ್ಷದ ನಾಯಕ ಸಿದ್ದರಾಮಯ್ಯ ಆರೋಪಿಸಿದ್ದಾರೆ.

ಈ ಕುರಿತು ಸರಣಿ ಟ್ವೀಟ್ ಮಾಡಿರುವ ಅವರು, ಯಾವುದೇ ನಿರ್ದಿಷ್ಟ ಉದ್ದೇಶಕ್ಕೆ ಸಂಗ್ರಹಿಸಲಾಗುವ ಸೆಸ್ ಹಣವನ್ನು ಅನ್ಯ ಉದ್ದೇಶಕ್ಕೆ ಬಳಸುವುದು ಕಾನೂನು ಉಲ್ಲಂಘನೆಯಾಗಿದೆ. ಜಿಎಸ್‌ಟಿ ಪರಿಹಾರ ಕಾಯ್ದೆಯ ಪ್ರಕಾರ ಜಿಎಸ್‌ಟಿಯಿಂದ ರಾಜ್ಯಗಳಿಗಾಗುವ ನಷ್ಟಕ್ಕೆ ಪರಿಹಾರ ನೀಡಲು ಸಂಗ್ರಹಿಸಲಾಗುವ ಸೆಸ್ ಮೊತ್ತವನ್ನು ಪ್ರತ್ಯೇಕ ಖಾತೆಯಲ್ಲಿ ಠೇವಣಿ ಮಾಡಬೇಕಾಗುತ್ತದೆ. ಇದರಲ್ಲಿ ವ್ಯಯವಾಗದ ಉಳಿದಿರುವ ಹಣವನ್ನು ಮುಂದಿನ ವರ್ಷಕ್ಕೆ ವರ್ಗಾಯಿಸುವ ಅವಕಾಶ ಕೂಡಾ ಇದೆ. ಆದರೆ, ಮೋದಿ ಸರ್ಕಾರ ಅದನ್ನು ಕನ್ಸಾಲಿಡೇಟ್ ಫಂಡ್‌ಗೆ ವರ್ಗಾಯಿಸಿ ಕಾಯ್ದೆಯ ಉಲ್ಲಂಘನೆ ಮಾಡಿದೆ ಎಂದು ಆರೋಪಿಸಿದ್ದಾರೆ.